# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಕನಕಪುರ

## ಸಿಸಿ ನಂ.480/2017

| ಚಾಸಾ | 1 | ಪ್ರಾಸಾ | 1 |
|---|---|---|---|
| ಹೆಸರು | | ನರಸಿಂಹ | |
| ತಂದೆಯ ಹೆಸರು | | ರಾಮಯ್ಯ | |
| ವಯಸ್ಸು | | **48** ವರ್ಷಗಳು | |
| ಉದ್ಯೋಗ | | ವ್ಯವಸಾಯ | |
| ವಿಳಾಸ | | ಮುತ್ತುಗದಪಾಳ್ಯ | |

ದಿನಾಂಕ**.30.10.2025**ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು.

**ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ನನಗೆ ಈ ಪ್ರಕರಣದ ಆರೋಪಿತರು ಗೊತ್ತಿಲ್ಲ. ಚಾಸಾ-**2** ರಿಂದ **08** ರವರು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯು ಗುರುತಿಸಿದ ದಾಖಲೆಯು ದೂರು ಆಗಿದ್ದು, ಅದನ್ನು ನಿಪಿ-**1** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-**1**(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯು ಗುರುತಿಸಿದ ದಾಖಲೆಯು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು ಅದನ್ನು ನಿಪಿ-2 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ನಾನು ಯಾವುದೇ ಅಪಘಾತವನ್ನು ನೋಡಿಲ್ಲ, ಅಪಘಾತವನ್ನು ನೋಡಿರುತ್ತೇನೆಂದು ನಾನು ಯಾವತ್ತು ಪೊಲೀಸರಿಗೆ ದೂರು ನೀಡಿಲ್ಲ. ಅಪಘಾತ ಹೇಗೆ ಅಯಿತು ಮತ್ತು ಯಾರ ತಪ್ಪಿ ನಿಂದ ಆಯಿತು ಎಂದು ನನಗೆ ಗೊತ್ತಿಲ್ಲ. ನಿಪಿ-1 ಮತ್ತು ನಿಪಿ-2ಕ್ಕೆ ನಾನು ಪೊಲೀಸ್ ಠಾಣೆಯಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ನಿಪಿ-1 ಮತ್ತು ನಿಪಿ-2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-2ಕ್ಕೆ ನನ್ನೊಂದಿಗೆ ಮತ್ತ್ಯಾರು ಸಹಿ ಮಾಡಿರುತ್ತಾರೆಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮಹಜರ್ ಮಾಡಿಲ್ಲ ಮತ್ತು ಯಾವುದೇ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆಗಳನ್ನು ನೀಡಿಲ್ಲ.

ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ದವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರವರು ಅನುಮತಿ ಕೋರಿದ್ದು, ಅನುಮತಿಯನ್ನು ನೀಡಲಾಯಿತು.

<u>ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>

ದಿನಾಂಕ.**15.12.2016**ರಂದು ನಾನು ಕೆಲಸದ ನಿಮಿತ್ತ ನಾನು ಹಾರೋಹಳ್ಳಿಗೆ ನನ್ನ ಬೈಕಿನಲ್ಲಿ ಹೋಗುತ್ತಿದ್ದಾಗ ಮಧ್ಯಾಹ್ನ **12.30**ಕ್ಕೆ ಬೆಂಗಳೂರು-ಕನಕಪುರ ಮುಖ್ಯರಸ್ತೆ, ಗಬ್ಬಾಡಿ ಕೆರೆಯ ಏರಿಯ ಬಳಿ ಒಂದು ಇಚರ್ ಗೂಡ್ಸ್ ವಾಹನದ ಚಾಲಕ ತನ್ನ ವಾಹನವನ್ನು ನನ್ನ ವಾಹನದ ಹಿಂಬದಿಯಿಂದ ಅಂದರೆ ಬೆಂಗಳೂರು ಕಡೆಯಿಂದ ಕನಕಪುರದ ಕಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ನನ್ನನ್ನು ಸೈಡ್ ಹೊಡೆದು ಬಂದು ರಸ್ತೆಯ ಬಲಕ್ಕೆ ಚಲಿಸಿ ಎದುರುಗಡೆಯಿಂದ ಬರುತ್ತಿದ್ದ ಬೈಕಿಗೆ ಡಿಕ್ಕಿ ಹೊಡೆಸಿದನು ಎಂದರೆ ಸರಿಯಲ್ಲ. ಇದರಿಂದ ಸದರಿ ಬೈಕಿನ ಸವಾರ ರಸ್ತೆಯಲ್ಲಿ ಬಿದ್ದಾಗ ಬೈಕಿನ ಹಿಂಬದಿ ಬರುತ್ತಿದ್ದ ಕೆ.ಎಸ್.ಆರ್.ಟಿ.ಸಿ ಬಸ್ಸಿನ ಚಾಲಕ ತನ್ನ ವಾಹನವನ್ನು ನಿಧಾನಿಸಿಕೊಳ್ಳದೆ ನಿರ್ಲಕ್ಷತನದಿಂದ ಚಲಿಸಿ ಬೈಕ್ ಸವಾರನ ಸೊಂಟದ ಮೇಲೆ ಚಕ್ರವನ್ನು ಅರಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ತಕ್ಷಣವೇ ಬೈಕ್ ನಿಲ್ಲಿಸಿ ಹತ್ತಿರ ಹೋಗಿ ನೋಡಿದಾಗ ಬೈಕ್ ಸವಾರನ ಸೊಂಟ ಮತ್ತು ಬೆನ್ನಿಗೆ ತೀವ್ರ ಸ್ವರೂಪದ ರಕ್ತಗಾಯವಾಗಿತ್ತು ಎಂದರೆ ಸರಿಯಲ್ಲ. ಆತನನ್ನು ನಾನೇ ಉಪಚರಿಸಿ ಕೇಳಿದಾಗ ಆತನು ನನ್ನ ಹೆಸರು ನವೀನ ಎಂದು ತಿಳಿಸಿರುತ್ತಾನೆ ಎಂದರೆ ಸರಿಯಲ್ಲ. ಆ ದಿನ ಸದರಿ ನವೀನ ರವರು ಚಾಲನೆ ಮಾಡುತ್ತಿದ್ದ ವಾಹನ ಸಂಖ್ಯೆ ಕೆಎ-**42**-ಜೆ-**8576** ಆಗಿತ್ತು ಎಂದರೆ ನನಗೆ ಗೊತ್ತಿಲ್ಲ. ಅಪಘಾತ ಪಡಿಸಿದ ವಾಹನಗಳ ಸಂಖ್ಯೆ ಕೆಎ-**01**-ಎಎ-**4067** ಮತ್ತು ಕೆ.ಎಸ್.ಆರ್.ಟಿ.ಸಿ ಬಸ್ ನಂ.ಕೆಎ-**42**-ಎಫ್-**737** ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನಂತರ ಗಾಯಗೊಂಡ ನವೀನನ ಮನೆಯವರಿಗೆ ಪೋನ್ ಮಾಡಿ ನಾನು ಅವರಿಗೆ ವಿಚಾರ ತಿಳಿಸಿ

ನಂತರ ಆಂಬ್ಯೂಲೆನ್ಸ್ ನಲ್ಲಿ ಆತನನ್ನು ಬೆಂಗಳೂರಿನ ಆಸ್ಪತ್ರೆಗೆ ಕಳುಹಿಸಿಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಬೆಂಗಳೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಸಮಯದಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಸದರಿ ನವೀನ ಸಂಜೆ **5.15**ಗಂಟೆಗೆ ಮೃತಪಟ್ಟಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಈ ಈ ವಿಚಾರಕ್ಕೆ ಸಂಬಂಧಿಸಿದಂತೆ ನಾನು ಬಸ್ಸು ಮತ್ತು ಈಚರ್ ವಾಹನದ ಚಾಲಕರ ವಿರುದ್ದ ಕ್ರಮ ಕೈಗೊಳ್ಳಲು ನಿಪಿ-**1**ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದೂರು ಪಡೆದ ನಂತರ ಪೋಲೀಸರು ದಿಃ**16.12.2016** ರಂದು ಘಟನಾ ಸ್ಥಳಕ್ಕೆ ಬಂದು ನಾನು ತೋರಿಸಿದ ಸ್ಥಳದಲ್ಲಿ ನನ್ನ ಹಾಗೂ ಚಾಸಾ-**2** ಮತ್ತು ಚಾಸಾ-**3** ರವರ ಸಮಕ್ಷಮ ಬೆಳಿಗ್ಗೆ **9.00** ರಿಂದ **10.00** ಗಂಟೆಗೆಯ ವರೆಗೆ ಸ್ಥಳ ಪರಿಶೀಲನೆ ಮಾಡಿ ಅಪಘಾತ ಪಡಿಸಿದ ಮತ್ತು ಅಪಘಾತ ಕ್ಕೆ ಒಳಗಾದ ವಾಹನಗಳನ್ನು ಅಮಾನತ್ತು ಪಡಿಸಿಕೊಂಡು ಅದಕ್ಕೆ ಸಂಬಂಧಿಸಿದಂತೆ ಒಂದು ಮಹಜರ್ ನ್ನು ತಯಾರಿಸಿ ಅದರ ವಿಚಾರ ನಮಗೆ ಓದಿ ಹೇಳಿ ಸ್ಥಳದಲ್ಲಿಯೇ ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಈ ಮೇಲಿನ ವಿಚಾರಕ್ಕೆ ಸಂಬಂಧಿಸಿದಂತೆ ನಾನು ಪೊಲೀಸರ ಮುಂದೆ ಅಪಘಾತದ ವಿಚಾರಕ್ಕೆ ಸಂಬಂಧಿಸಿದಂತೆ ಮತ್ತು ಅಪಘಾತ ಪಡಿಸಿದ ವಾಹನದ ಚಾಲಕರನ್ನು ತನಿಖಾಕಾಲದಲ್ಲಿ ನೋಡಿದರೆ ಗುರುತಿಸುವುದಾಗಿ ಎರಡು ಹೇಳಿಕೆಗಳನ್ನು ನೀಡಿರುತ್ತೇನೆಂದರೆ ಸರಿಯಲ್ಲ. ಸದರಿ ಎರಡು ಹೇಳಿಕೆಗಳನ್ನು ಕ್ರಮವಾಗಿ ನಿಪಿ-**3** ಮತ್ತು ನಿಪಿ-**4** ಎಂದು ಗುರುತಿಸಲಾಯಿತು.

ಆರೋಪಿತರು ನನಗೆ ಪರಿಚಯಸ್ಥರು ಎಂದರೆ ಸರಿಯಲ್ಲ. ಆರೋಪಿತರು ನನಗೆ ಪರಿಚಯಸ್ಥರಾದ ಕಾರಣ ನಾನು ಅಪಘಾತವನ್ನು ಕಣ್ಣಾರೆ ನೋಡಿದ್ದರು, ನೋಡಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ನಿಪಿ-1 ರಿಂದ 4 ರಲ್ಲಿರುವ ಸಂಗತಿಗಳು ನನಗೆ ಗೊತ್ತಿದ್ದರೂ ನನಗೆ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-</u>

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

<u>ಮರುವಿಚಾರಣೆಃ- ಇಲ್ಲ</u>

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಢೀಕರಿಸುತ್ತೇನೆ.)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**